**OS.No.**57/2021
**ಪಿ ಡಬ್ಲ್ಯೂ:1**

**ಮಧ್ಯಂತರ ಅರ್ಜಿಯ ಮೇಲೆ ಆದ ಆದೇಶದ ಮೇರೆಗೆ ದಿಃ 23-06-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2ನೇ ಪ್ರತಿವಾದಿ ಪರ ಶ್ರೀ ಹೆ ಎಂ ವಕೀಲರಿಂದ**

2 ನೇ ಪ್ರತಿವಾದಿ ನನ್ನ ಅಣ್ಣ ಇರುತ್ತಾರೆ. 2 ನೇ ಪ್ರತಿವಾದಿಯು ನ್ಯಾಯಾಲಯಕ್ಕೆ ಹಾಜರಾಗಿ ಪ್ರತಿವಾದ ಪತ್ರ ಸಲ್ಲಿಸಿರುವುದರ ಬಗ್ಗೆ ನನಗೆ ಮಾಹಿತಿ ಇರುತ್ತದೆ. ಕೌಂಟರ್ ಕ್ಲೇಮು ಆಸ್ತಿಯಲ್ಲಿ 37 ಗುಂಟೆ ಜಮೀನು ಇರುತ್ತದೆ ಎಂದರೆ ಸರಿ. ಸದರಿ ಜಮೀನು ಈಗ ಕೆಂಚಪ್ಪ ಎನ್ನುವವರ ಹೆಸನರಿಲ್ಲಿ ಇರುತ್ತದೆ. ಸದರಿ ಆಸ್ತಿಯನ್ನು ನಾನು ನನ್ನ ವಾದ ಪತ್ರದಲ್ಲಿ ಸೇರಿಸಿಲ್ಲ ಎಂದರೆ ಸರಿ. ಸದರಿ ಆಸ್ತಿಯು ಸಹ ಒಟ್ಟು ಕುಟುಂಬದ ಆಸ್ತಿ ಎಂದರೆ ಸರಿ. ಸದರಿ ಆಸ್ತಿಯಲ್ಲಿ ವಾದಿ ಮತ್ತು ಪ್ರತಿವಾದಿಯರಿಗೆ ಹಕ್ಕು ಇರುತ್ತದೆ ಎಂದರೆ ಸರಿ. ಸದರಿ ಆಸ್ತಿಯಲ್ಲಿ ನಾವೇ ಸ್ವಾಧೀನದಲ್ಲಿರುತ್ತೇವೆ. ಸದರಿ ಆಸ್ತಿಯ ಸ್ವಾಧೀನ ನಮ್ಮ ಬಳಿ ಇರುತ್ತದೆ ಎಂದು ಅದನ್ನು ಈ ದಾವಾದಲ್ಲಿ ಸೇರಿಸಿಲ್ಲ ಎಂದರೆ ಸಾಕ್ಷಿಯು ಅದು ವಿಲ್ ಆಗಿರುವ ಕಾರಣ ಸೇರಿಸಿಲ್ಲ ಎಂದು ನುಡಿಯುತ್ತಾರೆ. ನಮ್ಮ ತಂದೆಯವರು ಮೂರು ಜನ ಹೆಣ್ಣು ಮಕ್ಕಳಿಗೆ ಸದರಿ ಆಸ್ತಿಯನ್ನು ವಿಲ್ ಮೂಲಕ ಕೊಟ್ಟಿದ್ದರು.

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)
ಓ ಹೇ ಕೇ ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ., ಚನ್ನಗಿರಿ.